# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1075 |
| ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ)<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 18.12.2024 |
| ಉತ್ತರಿಸುವ ಸಚಿವರು | : | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜಿನ ಪ್ರಾಂಶುಪಾಲರು, ನಿಲಯಪಾಲಕರು, ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು ಮತ್ತು ಜಿಲ್ಲಾ ಮತ್ತು ಕೇಂದ್ರ ಗಣಕಯಂತ್ರ ಸಹಾಯಕರು ಮತ್ತು ಜಿಲ್ಲಾ ಅಧಿಕಾರಿಗಳು, ಪ್ರಥಮ ದರ್ಜೆ ಸಹಾಯಕರು, ತಾಲ್ಲೂಕು ವಿಸ್ತರಣಾಧಿಕಾರಿಗಳು ಮತ್ತು ಮೆಟ್ರಿಕ್ ನಂತರದ ನಿಲಯಪಾಲಕರ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮಾಹಿತಿ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ಕಛೇರಿ</th><th>ಹುದ್ದೆಗಳು</th><th>ಕಾರ್ಯ ನಿರ್ವಹಿಸು ತ್ತಿರುವ ಸಂಖ್ಯೆ</th></tr>
<tr><td rowspan="3">1</td><td rowspan="3">ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಕಾಲೇಜುಗಳು</td><td>1. ಪ್ರಾಂಶುಪಾಲರು</td><td>110</td></tr>
<tr><td>2. ನಿಲಯಪಾಲಕರು</td><td>68</td></tr>
<tr><td>3. ಪ್ರಥಮ ದರ್ಜೆ ಗಣಕಯಂತ್ರ ಸಹಾಯಕರು</td><td>82</td></tr>
<tr><td rowspan="4">2</td><td rowspan="4">ಜಿಲ್ಲಾ ಮತ್ತು ಕೇಂದ್ರ ಕಛೇರಿ</td><td>1. ಜಿಲ್ಲಾ ಅಧಿಕಾರಿಗಳು</td><td>31</td></tr>
<tr><td>2. ಪ್ರಥಮ ದರ್ಜೆ ಸಹಾಯಕರು</td><td>41</td></tr>
<tr><td>3. ತಾಲ್ಲೂಕು ವಿಸ್ತರಣಾಧಿಕಾರಿಗಳು</td><td>71</td></tr>
<tr><td>4. ಮೆಟ್ರಿಕ್ ನಂತರ ನಿಲಯಪಾಲಕರು</td><td>167</td></tr>
</table></td></tr>
<tr><td>ಆ)</td><td>ತಾಲ್ಲೂಕು ವಿಸ್ತರಣಾಧಿಕಾರಿಗಳು ಮತ್ತು ಪ್ರಾಂಶುಪಾಲರ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಮೂಲಕ ಮುಂಬಡ್ತಿ ನೀಡದೆ ಕಾರ್ಯಕಾರಿ ಆದೇಶದ ಮೂಲಕ ಮುಂಬಡ್ತಿ ನೀಡುತ್ತಿರುವ ಉದ್ದೇಶವೇನು; (ಸಂಪೂರ್ಣ ಮಾಹಿತಿ ನೀಡುವುದು)</td><td>ತಾಲ್ಲೂಕು ವಿಸ್ತರಣಾಧಿಕಾರಿಗಳು ಮತ್ತು ಪ್ರಾಂಶುಪಾಲರ ಹುದ್ದೆಗಳ ಪದೋನ್ನತಿಗೆ ಸಂಬಂಧಿಸಿದಂತೆ ಪ್ರಸ್ತುತದವರೆಗೂ ಯಾವುದೇ ಕಾರ್ಯಕಾರಿ ಆದೇಶ ಹೊರಡಿಸಿರುವುದಿಲ್ಲ.</td></tr>
<tr><td>ಇ)</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವಾಗ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ನಿಯಮಗಳನ್ನು ಪಾಲಿಸಲಾಗಿದೆಯೇ; ಪಾಲಿಸಿದ್ದಲ್ಲಿ, ತಾಲ್ಲೂಕು ವಿಸ್ತರಣಾಧಿಕಾರಿಗಳ ಹುದ್ದೆಗಳಿಗೆ ಯಾವ ಆಧಾರದ ಮೇಲೆ ಪೋಷಕ ವೃಂದಗಳನ್ನು ಪರಿಗಣಿಸಲಾಗಿದೆ;</td><td>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವಾಗ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ನಿಯಮಗಳನ್ವಯ ತಾಲ್ಲೂಕು ವಿಸ್ತರಣಾಧಿಕಾರಿಗಳ ಹುದ್ದೆಗಳಿಗೆ ಕೆಳ ಹಂತದ ವೃಂದದ ಹುದ್ದೆಗಳನ್ನು ಪೋಷಕ ವೃಂದಗಳನ್ನಾಗಿ ಪರಿಗಣಿಸಲಾಗಿರುತ್ತದೆ.</td></tr>
</table>

| | | |
|---|---|---|
| ಈ) | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ನಿಯಮಗಳಂತೆ ಪ್ರತಿ ಮೂರು ವರ್ಷಕ್ಕೊಮ್ಮೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡಲು ಅವಕಾಶ ಇದ್ದರೂ, ಸಹ 2011 ರಿಂದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತಿದ್ದುಪಡಿ ಮಾಡದೆ ಇರಲು ಕಾರಣವೇನು? | ಪ್ರಸ್ತುತ ಚಾಲ್ತಿಯಲ್ಲಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ 2011ರ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿದ್ದು, ಪರಿಶೀಲನೆಯಲ್ಲಿದೆ. |

**ಸಂಖ್ಯೆ: MWD 259 LMQ 2024**

**(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು